**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:24-08-2020

**ಸ್ಪಷ್ಟೀಕರಣ**

1. ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:18.05.2020ರಲ್ಲಿ ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ಲಾಕ್‌ಡೌನ್ ಕ್ರಮಗಳ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಅದರಲ್ಲಿ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ಮತ್ತು ಸ್ಟೇಡಿಯಂಗಳನ್ನು ವೀಕ್ಷಕರ ನಿರ್ಬಂಧದೊಂದಿಗೆ ಅಭ್ಯಾಸಕ್ಕಾಗಿ ತೆರೆಯಲು ಅನುಮತಿಸಲಾಗಿದೆ. ಅಲ್ಲದೇ, ದಿನಾಂಕ:21.05.2020ರಂದು ಹೊರಡಿಸಲಾಗಿರುವ ಸ್ಪಷ್ಟೀಕರಣದಲ್ಲಿ ಪ್ರೇಕ್ಷಕರಿಲ್ಲದೇ ಕ್ರೀಡಾ ಚಟುವಟಿಕೆಗಳನ್ನು ಪುನರಾರಂಭಿಸಲು ಸ್ಪಷ್ಟಪಡಿಸಲಾಗಿದೆ.

2. ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:30.07.2020 ತೆರವು-3ರ ಆದೇಶವನ್ನು ಹೊರಡಿಸಲಾಗಿದ್ದು, ಅದರಲ್ಲಿ ಈ ಕೆಳಗಿನವುಗಳನ್ನು ನಿರ್ಬಂಧಿಸಲಾಗಿದೆ:

i. ಸಿನಿಮಾ ಮಂದಿರಗಳು, ಈಜುಕೊಳಗಳು, ಮನೋರಂಜನಾ ಉದ್ಯಾನವನಗಳು, ಚಿತ್ರಮಂದಿರಗಳು, ಬಾರ್‌ಗಳು, ಸಭಾಂಗಣಗಳು, ಅಸೆಂಬ್ಲಿ ಹಾಲ್‌ಗಳು ಮತ್ತು ಅಂತಹುದೇ ಸ್ಥಳಗಳು;

ii. ಸಾಮಾಜಿಕ / ರಾಜಕೀಯ / ಕ್ರೀಡೆ / ಮನೋರಂಜನೆ / ಶೈಕ್ಷಣಿಕ / ಸಾಂಸ್ಕೃತಿಕ / ಧಾರ್ಮಿಕ ಕಾರ್ಯಗಳು ಮತ್ತು ಇತರೆ ಬೃಹತ್ ಸಭೆಗಳು;

iii. 65 ವರ್ಷಕ್ಕಿಂತ ಮೇಲ್ಪಟ್ಟ ವ್ಯಕ್ತಿಗಳು, ಸಹ-ಅಸ್ವಸ್ಥತೆ ಹೊಂದಿರುವ ವ್ಯಕ್ತಿಗಳು, ಗರ್ಭಿಣಿಯರು ಮತ್ತು 10 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಅಗತ್ಯ ಮತ್ತು ಆರೋಗ್ಯ ಉದ್ದೇಶಗಳನ್ನು ಹೊರತುಪಡಿಸಿ ಮನೆಯಲ್ಲಿಯೇ ಇರಲು ಸಲಹೆ ನೀಡಲಾಗಿದೆ.

3. ಈ ಮೇಲಿನ ನಿರ್ಬಂಧಗಳೊಂದಿಗೆ, ಕೋವಿಡ್-19ರ ಸಂಬಂಧವಾಗಿ ಹೊರಡಿಸಲಾದ ರಾಷ್ಟ್ರೀಯ ನಿರ್ದೇಶನಗಳನ್ನು ಹಾಗೂ ರಾಜ್ಯ ಸರ್ಕಾರದ ಆದೇಶ/ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಷರತ್ತಿಗೊಳಪಟ್ಟು ರಾಜ್ಯದಲ್ಲಿನ ಸಾಮಾಜಿಕ ಕ್ಲಬ್‌ಗಳಲ್ಲಿ ಕ್ರೀಡಾ ಚಟುವಟಿಕೆಗಳನ್ನು ನಡೆಸಲು ಹಾಗೂ ಮೇಜಿನ ಮೇಲೆ ಆಹಾರ ವ್ಯವಸ್ಥೆಯನ್ನು ಕಲ್ಪಿಸಲು ಅವಕಾಶವಿರುವ ಕುರಿತು ಸ್ಪಷ್ಟಪಡಿಸಲಾಗಿದೆ.

4. ಸಾಮಾಜಿಕ ಕ್ಲಬ್‌ಗಳಲ್ಲಿ ಮದ್ಯ ಸರಬರಾಜನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.

**(ಅಂಜುಂ ಪರ್ವೇಜ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ) ಹಾಗೂ ಸದಸ್ಯ ಕಾರ್ಯದರ್ಶಿ
ರಾಜ್ಯ ಕಾರ್ಯಕಾರಿ ಸಮಿತಿ,

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.